ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ್, ಹಾಸನ
ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಪದ್ಮಶ್ರೀ ಕಮರ್ಷಿಯಲ್ ಕಾಂಪ್ಲೆಕ್ಸ್ , ಹೋಟೆಲ್ ಪಾಲಿಕ ಹತ್ತಿರ, ಆರ್.ಸಿ.ರೋಡ್, ಹಾಸನ-573201
E-Mail:dobcmhassan@gmail.com ☎ Fax/Phone No:08172-268372

ಸಂಖ್ಯೆ:ಹಿಂವಕಇ/ಸಿಬ್ಬಂದಿ-03/ಗ್ರೂಪ್-ಡಿ ನೆ ನೇ -01/2016-17 ದಿನಾಂಕ:07-07-2017

## ತಿಳುವಳಿಕೆ ಪತ್ರ

ವಿಷಯ:- ಹಾಸನ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಗ್ರೂಪ್-ಡಿ ವೃಂದದ ಅಡುಗೆಯವರ ಮತ್ತು ಅಡುಗೆ ಸಹಾಯಕರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು ಪ್ರಕಟಿಸಲಾಗಿರುವ ತಾತ್ಕಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸುವ ಬಗ್ಗೆ.

ಉಲ್ಲೇಖ:-
1) ಸರ್ಕಾರಿ ಆದೇಶದ ಸಂಖ್ಯೆ:ಹಿಂವಕ90/ಬಿಇಟಿ/2016(ಬಾ-2)ಬೆಂಗಳೂರು ದಿನಾಂಕ:29-06-2017.
2) ಸರ್ಕಾರಿ ಆದೇಶ ಸಂಖ್ಯೆ:ಹಿಂವಕಇ/ಸಿಬ್ಬಂದಿ-3/ಸಿಆರ್-8/2015-16 ದಿನಾಂಕ:02-06-2016
3) ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು ಇವರ ಅಧಿಕೃತ ಜ್ಞಾಪನ ಸಂ:ಹಿಂವಕ/90/ಬಿಇಟಿ 2016 (ಭಾಗ-2) ದಿನಾಂಕ:27-06-2016

ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ಮತ್ತು (2) ರ ಆದೇಶದಂತೆ ಹಾಸನ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಅಡುಗೆಯವರ ಮತ್ತು ಅಡುಗೆ ಸಹಾಯಕರ ಹುದ್ದೆಗಳಿಗೆ ನೇರ ನೇಮಕಾತಿ ಸಂಬಂಧ ಉಲ್ಲೇಖ (3) ರ ತಿದ್ದುಪಡಿ ಆದೇಶದಂತೆ ದಿನಾಂಕ: 03-07-2017 ಮತ್ತು 04-07-2017 ರಂದು ಅಡುಗೆಯವರ ಮತ್ತು ಅಡುಗೆ ಸಹಾಯಕರ ಹುದ್ದೆಗಳಿಗೆ ಪ್ರಾಯೋಗಿಕ ಪರೀಕ್ಷೆಗೆ ಹಾಜರಾಗಿ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಎಸ್.ಎಸ್.ಎಲ್.ಸಿ ಅಂಕಗಳ ಜೇಷ್ಠತೆ ಮತ್ತು ಮೀಸಲಾತಿವಾರು ತಯಾರಿಸಿದ ತಾತ್ಕಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಈ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಅಭ್ಯರ್ಥಿಗಳಿಂದ ಏನಾದರು ಆಕ್ಷೇಪಣೆ ಇದ್ದಲ್ಲಿ, ಲಿಖಿತವಾಗಿ ಪೂರಕ ದೃಢೀಕೃತ ದಾಖಲೆಗಳೊಂದಿಗೆ ದಿನಾಂಕ:21-07-2017ರ ಒಳಗಾಗಿ ಕಛೇರಿ ಸಮಯದಲ್ಲಿ ತಲುಪುವಂತೆ, ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಮಟ್ಟದ ನೇಮಕಾತಿ ಸಮಿತಿ ಹಾಗೂ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಹಾಸನ ಜಿಲ್ಲೆ, ಹಾಸನ ಇವರಿಗೆ ಅಂಚೆ/ಮುದ್ದಾಂ ಮೂಲಕ ಸಲ್ಲಿಸಲು ತಿಳಿಸಿದೆ. ನಿಗಧಿತ ದಿನಾಂಕದ ನಂತರ ಬಂದ ಆಕ್ಷೇಪಣೆಯನ್ನು ಪರಿಗಣಿಸಲಾಗುವುದಿಲ್ಲ.

ಸದಸ್ಯ ಕಾರ್ಯದರ್ಶಿಗಳು
ಜಿಲ್ಲಾ ಮಟ್ಟದ ನೇಮಕಾತಿ ಸಮಿತಿ
ಹಾಗೂ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ
ಹಾಸನ ಜಿಲ್ಲೆ, ಹಾಸನ

Kdrive/srinivassir/group-d/dcletter/2017-18